**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ.ಸಿ. ಸಂಃ 3741/2022**

| | | |
|---|---|---|
| ಸಾಕ್ಷಿಯ ಹೆಸರುಃ | ಪ್ರತಾಪ್ | ಫ್ರಾಸಾಃಃ 6 |
| ತಂದೆಯ ಹೆಸರುಃ | ಅಣ್ಣಯ್ಯ | ಚಾಸಾಃಃ 3 |
| ವಯಸ್ಸುಃ | 22 ವರ್ಷ | ಪ್ರಮಾಣೀಕರಿಸಿದ ದಿಃ 17.09.2025. |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ನವಿಲೂರು ಗ್ರಾಮ, ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ** ಮಾನ್ಯ **ಸಸಅ ರವರಿಂದಃ**

1. ಮೃತ ಮೈಲಾರಿಗೌಡ ನನಗೆ ಗೊತ್ತು. ಚಾಸಾ - 1 ನನಗೆ ಗೊತ್ತು. ಆರೋಪಿ ನನಗೆ ಗೊತ್ತಿಲ್ಲ.
2. ಈಗ್ಗೆ 2 ವರ್ಷದ ಹಿಂದೆ ನಾನು ಪಿರಿಯಾಪಟ್ಟಣದಿಂದ ನಮ್ಮ ಊರು ನವಿಲೂರಿಗೆ ಹೋಗುತ್ತಿದ್ದಾಗ, ಮಧ್ಯಾಹ್ನ 2 ಗಂಟೆ ಸಮಯದಲ್ಲಿ ವಿರುಪಾಕ್ಷ ರವರ ತೋಟದ ಬಳಿ ಹೋದಾಗ ಮೃತ ಮೈಲಾರಿಗೌಡರು ಅಪಘಾತವಾಗಿ ಸ್ಥಳದಲ್ಲಿ ಬಿದ್ದಿದ್ದರು. ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಯಿತು ಎಂದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(**ಈ ಸಮಯದಲ್ಲಿ ಸಹಾಯ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.**)**

ಪಾಟೀ ಸವಾಲುಃ ಸಸಅ ರವರಿಂದಃ

1. ದಿಃ 26.04.2022 ರಂದು ಮಧ್ಯಾಹ್ನ 3-00 ಗಂಟೆ ಸಮಯದಲ್ಲಿ ನಾನು ಪಿರಿಯಾಪಟ್ಟಣದಿಂದ ನಮ್ಮ ಊರಿಗೆ ಹೋಗುತ್ತಿದ್ದಾಗ, ಮೃತ ಮೈಲಾರಿಗೌಡ ರವರು ಅವರ ಬೈಕ್ ಕೆಎ.03.ಹೆಚ್ಇ.369 ರಲ್ಲಿ ಹೊಂಡಾ ಸ್ಕೂಟರ್ ನಲ್ಲಿ ಪಿರಿಯಾಪಟ್ಟಣದಿಂದ ಕುಶಾಲನಗರ ಕಡೆಗೆ ಹೋಗುತ್ತಿದ್ದಾಗ, ಆರೋಪಿಯು ತನ್ನ ಕೆಎ.11.ಎಂ.3749 ರ ಅಲ್ಟೋ ಕಾರನ್ನು ಕುಶಾಲನಗರ ಕಡೆಯಿಂದ ಪಿರಿಯಾಪಟ್ಟಣ ಕಡೆಗೆ ಅತೀವೇಗ ಹಾಗೂ

ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು, ಮೃತ ಮೈಲಾರಿಗೌಡರ ಬೈಕಿಗೆ ಡಿಕ್ಕಿಪಡಿಸಿದರು ಎಂದರೆ ಸರಿಯಲ್ಲ.

2. ನಂತರ ಮೈಲಾರಿಗೌಡರು ಕೆಳಗೆ ಬಿದ್ದು, ಕಾಲು ಮತ್ತು ಹೊಟ್ಟೆಗೆ ತೀವ್ರ ಸ್ವರೂಪದ ಗಾಯವಾಗಿದ್ದವು ಎಂದರೆ ಸರಿಯಲ್ಲ. ನಂತರ ಪಿರಿಯಾಪಟ್ಟಣ ಸರ್ಕಾರಿ ಆಸ್ಪತ್ರೆಗೆ ಹೋಗಿ ದಾಖಲು ಮಾಡಿ, ನಂತರ ಹೆಚ್ಚಿನ ಚಿಕಿತ್ಸೆಗೆ ಒಂದು ಅಂಬ್ಯುಲನ್ಸ್ ನಲ್ಲಿ ಮೈಸೂರಿನ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿದ್ದಾಗ ಮಾರ್ಗ ಮಧ್ಯೆ ಕಂಪಲಾಪುರ ಗ್ರಾಮದ ಬಳಿ ಮೃತರಾಗಿರುತ್ತಾರೆ ಎಂಬ ವಿಚಾರ ತಿಳಿಯಿತು ಎಂದರೆ ಸರಿಯಲ್ಲ.

3. ಸದರಿ ಅಪಘಾತವನ್ನು ನಾನು ಪ್ರತಕ್ಷವಾಗಿ ನೋಡಿದ್ದು, ಸದರಿ ಅಪಘಾತ ಆರೋಪಿಯ ಅತೀವೇಗ ಹಾಗೂ ಅಜಾಗರೂಕತೆಯ ಚಾಲನೆಯಿಂದ ಆಗಿದೆ ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ - 13 ಎಂದು ಗುರುತಿಸಲಾಯಿತು.

2. ಆರೋಪಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃಆರೋಪಿ ಪರ ವಕೀಲರಿಂದಃ ಇಲ್ಲ ಎಂದು ನುಡಿಯುತ್ತಾರೆ.

ಮರು ವಿಚಾರಣೆಃ ಇಲ್ಲ

ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು

ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.

ಓ ಹೇ ಕೇ ಸ ಇ ಒ

ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂಡಾಧಿಕಾರಿಗಳು, ಪಿರಿಯಾಪಟ್ಟಣ.